**551 (894) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ)** :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರದಲ್ಲಿ ಪ್ರತ್ಯೇಕ ಮಹಿಳಾ ಪದವಿ ಪೂರ್ವ ಕಾಲೇಜು ತೆರೆಯುವ ವಿಷಯ ಸರ್ಕಾರದ ಗಮನದಲ್ಲಿ ಇದೆಯೇ;

ಆ) ಹಾಗಿದಲ್ಲಿ ಅವಶ್ಯಕವಿರುವ ಮಹಿಳಾ ಪದವಿ ಪೂರ್ವ ಕಾಲೇಜನ್ನು ಶೀಘ್ರದಲ್ಲಿ ತೆರೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ?

**ಶ್ರೀ ಎಸ್. ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**:

ಅ) ಹೌದು.

ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿಯು ನಿರಂತರ ಪ್ರಕ್ರಿಯೆಯಾಗಿದ್ದು, ಹತ್ತಿರದಲ್ಲಿರುವ ಸರ್ಕಾರಿ, ಖಾಸಗಿ ಅನುದಾನಿತ/ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ, ಇದರಲ್ಲಿನ ವಿದ್ಯಾರ್ಥಿಗಳ ದಾಖಿಲಾತಿ ಸಂಖ್ಯೆ, ಪೂರಕ ಪ್ರೌಢಶಾಲೆಗಳ ಸಂಖ್ಯೆ, ಅವುಗಳಲ್ಲಿ ಲಭ್ಯವಾಗುವ ವಿದ್ಯಾರ್ಥಿಗಳ ಸಂಖ್ಯೆ, ಶೈಕ್ಷಣಿಕ ಅಗತ್ಯತೆ, ಆಯವ್ಯಯದ ಲಭ್ಯತೆ, ಅಗತ್ಯ ಮೂಲಭೂತ ಸೌಲಭ್ಯಗಳ ಲಭ್ಯತೆ ಹಾಗೂ ಡಾ॥ ನಂಜುಂಡಪ್ಪನವರ ವರದಿಯನ್ವಯ ಹಂತಹಂತವಾಗಿ ಮಂಜೂರು ಮಾಡಲಾಗುತ್ತಿದೆ.

**552 (895) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ)** :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್.ಎಂ. ವಿಶ್ವೇಶ್ವರಯ್ಯ ನವರು ವ್ಯಾಸಂಗ ಮಾಡಿರುವ ಚಿಕ್ಕಬಳ್ಳಾಪುರ ಪದವಿ ಪೂರ್ವ ಕಾಲೇಜಿನಲ್ಲಿ ಸುಮಾರು 6000 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಅನುಪಾತಕ್ಕೆ ತಕ್ಕಂತೆ ಬೋಧಕೆ ಸಿಬ್ಬಂದಿಯ ಸಂಖ್ಯೆ ಎಷ್ಟು;

ಇ) ಹಾಗಿದ್ದಲ್ಲಿ, ಅವಶ್ಯಕತೆ ಇರುವ ಬೋಧಕ ನೇಮಕಾತಿಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ;

ಈ) ಮೇಲ್ಕಂಡ ಪದವಿ ಪೂರ್ವ ಕಾಲೇಜಿನಲ್ಲಿ ಈಗ ಕಾರ್ಯ ನಿರ್ವಹಿಸುತ್ತಿರುವ ಬೋಧಕರ ಸಂಖ್ಯೆ ಎಷ್ಟು?

**ಶ್ರೀ ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):**

ಅ) 2007–08ನೇ ಸಾಲಿನಲ್ಲಿ ಈ ತನಕ ದಾಖಲಾಗಿರುವ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತೆ ಇದೆ :–

| ವಿಷಯ | ಪ್ರಥಮ ಪಿ.ಯು.ಸಿ | ದ್ವಿತೀಯ ಪಿ.ಯು.ಸಿ |
|---|---|---|
| ಕಲೆ | 816 | 918 |
| ವಾಣಿಜ್ಯ | 292 | 312 |
| ವಿಜ್ಞಾನ | 268 | 207 |
| **ಒಟ್ಟು** | **1376** | **1437** |

ಆ) ಅಗತ್ಯಕ್ಕೆ ತಕ್ಕಷ್ಟು ಬೋಧಕ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

ಇ) ಈಗಾಗಲೇ 2175 ಉಪನ್ಯಾಸಕರನ್ನು ಆಯ್ಕೆ ಮಾಡುವಂತೆ ಕರ್ನಾಟಕ ಲೋಕ ಸೇವಾ ಆಯೋಗವನ್ನು ಕೋರಲಾಗಿದೆ. ಲೋಕ ಸೇವಾ ಆಯೋಗವು ಈಗಾಗಲೇ 475 ಉಪನ್ಯಾಸಕರನ್ನು ಆಯ್ಕೆ ಮಾಡಲಾಗಿದ್ದು ಆಯ್ಕೆ ಪಟ್ಟಿಯನ್ನು ಸಲ್ಲಿಸಿದ ಕೂಡಲೇ ನೇಮಕಾತಿ ಆದೇಶ ಹೊರಡಿಸಲಾಗುವುದು. ಉಳಿದ 1700 (27 ಬ್ಯಾಕ್‌ಲಾಗ್ ಹುದ್ದೆಗಳು ಸೇರಿ) ಉಪನ್ಯಾಸಕರ ಹುದ್ದೆಗಳ ಆಯ್ಕೆಗೆ ಲೋಕ ಸೇವಾ ಆಯೋಗವು ದಿನಾಂಕ : 05–07–2007 ರಂದು ಅಧಿಸೂಚನೆ ಹೊರಡಿಸಲಾಗಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಹತ್ತಿರದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರನ್ನು ನಿಯೋಜಿಸುವ ಮೂಲಕ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ.

ಈ) 23 ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ.

**553 (1184) ಶ್ರೀ ನರಸಿಂಹ ಸ್ವಾಮಿ ಜೆ. (ದೊಡ್ಡಬಳ್ಳಾಪುರ) :–** ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ಪದವಿ ಪೂರ್ವ ಕಾಲೇಜಿಗೆ ಈ ವರ್ಷ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಬೋಧಕ, ಬೋಧಕೇತರ ಮತ್ತು ಕೊಠಡಿಗಳ ಅನುಪಾತದ ವ್ಯತ್ಯಾಸ ಸರ್ಕಾರದ ಗಮನಕ್ಕೆ ಬಂದಿದೆಯೇ;